**ಸಾಕ್ಷಿಗೆ ದಿನಾಂಕ 16.09.2025 ರಂದು ಪ್ರಮಾಣ ವಚನ ನೀಡಲಾಯಿತು.**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು, ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಪ್ರಮಾಣ ಪತ್ರದಲ್ಲಿ ಹೇಳಲಾದ ಎಲ್ಲಾ ವಿಷಯಗಳನ್ನು ವಕೀಲರ ಮೂಲಕ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರದಲ್ಲಿ ಇರುವ ಸಹಿ ನನ್ನ ಸಹಿ ಆಗಿರುತ್ತದೆ.

**ಮುಖ್ಯವಿಚಾರಣೆಃವಾದಿ ಪರ ವಕೀಲರಿಂದಃ**

ಸರ್ವೆ ನಂಬರ 63 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ನಿಪಿ-1 ಎಂದು, ಸರ್ವೆ ನಂಬರ 63/1 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ-2 ಎಂದು, ದಿಃ19.01.2002 ರ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ನಿಪಿ-3 ಎಂದು, ದಿಃ06.06.1994 ರ ಖರೀದಿ ಪತ್ರವನ್ನು ಹಾಜರುಪಡಿಸಿದ್ದು ನಿಪಿ-4 ಎಂದು, ಮ್ಯುಟೇಶನ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ-5 ಎಂದು, ದಿಃ16.01.2020 ರ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ನಿಪಿ-6 ಎಂದು, ವಿದ್ಯುತ್ ಬಿಲ್ ನ್ನು ಹಾಜರುಪಡಿಸಿದ್ದು ನಿಪಿ-7 ಎಂದು, ಸ್ವಿಕೃತೀಯನ್ನು ಹಾಜರುಪಡಿಸಿದ್ದು ನಿಪಿ-8 ಎಂದು, ಹಿಂಬರಹವನ್ನು ಹಾಜರುಪಡಿಸಿದ್ದು ನಿಪಿ-9 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೇಳಿದ್ದು ಕಾಲವಕಾಶ ನೀಡಲಾಯಿತು.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ**
**ಹುಣಸೂರು.**